ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181 ಹೊಸಕೆರೆಹಳ್ಳಿ, ಬೆಂಗಳೂರು

ಸಂ: ಸ.ಅ/ವಾ-181/ಪಿ.ಆರ್/ 181 /2021-22

ದಿನಾಂಕ : 04-12-2021

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ವಿಷಯ- ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಐ12(58)ಪಿಆರ್/35/2020-, ದಿನಾಂಕ :21-09-2020 ರವರ ಆದೇಶದಂತೆ ದಿನಾಂಕ :04-12-2021 ರಂದು ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ಬಡಾವಣೆ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :04-12-2021 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ನಾಗರಾಜ್ ಬಿಗಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗ ಶ್ರೀ ವೆಂಕಟಮಲವಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಕೋವಿಡ್-19 ಸಾಂಕ್ರಾಮಿಕ ರೋಗ ಹರಡುತ್ತಿರುವ ಹಿನ್ನೆಲೆಯಲ್ಲಿ ಅತೀ ಹೆಚ್ಚು ಟೆಸ್ಟ್‌ಗಳನ್ನು ಮಾಡಲು ನೋಡೆ ಅಧಿಕಾರಿಗಳು ಸೂಚಿಸಲಾಗಿರುತ್ತಾರೆ.

2) ಕುಮಾರಸ್ವಾಮಿ ಬಡಾವಣೆಯ ಪೊಲೀಸ್ ಠಾಣೆ ರಸ್ತೆಯಲ್ಲಿ ಪಾದಚಾರಿ ಮಾರ್ಗದಲ್ಲಿರುವ ಅಂಗಡಿಗಳನ್ನು ತೆರ ಮಾಡುವಂತೆ ನೋಡಲ್ ಅಧಿಕಾರಿಯವರು ವಾರ್ಡ್ ಸಮಿತಿ ಸಭೆಯಲ್ಲಿ ಸೂಚಿಸಿರುತ್ತಾರೆ.

3) ಉದ್ಯಾನವನಗಳಲ್ಲಿ ಸರಿಯಾಗಿ ನಿರ್ವಹಣೆ ಮಾಡದಿರುವ ಬಗ್ಗೆ ಪ್ರಸ್ತಾವನೆ ಮಾಡಲಾಗಿರುತ್ತದೆ ಹಾಗೂ ಮುಂ ವಾರ್ಡ್ ಸಭೆಗೆ ಪಾರ್ಕ್ ನಿರ್ವಹಣೆ ಅಧಿಕಾರಿಯವರು ಹಾಜರಿರಲು ಸೂಚಿಸಲಾಗಿರುತ್ತದೆ.

4) ಬೆಸ್ಕಾಂ ಇಲಾಖೆಯಿಂದ ಕೇಬಲ್ ಅಳವಡಿಸಲು ಅಲ್ಲಲ್ಲಿ ಗುಂಡಿಗಳನ್ನು ತೆಗೆದಿರುವುದನ್ನು ಕೂಡಲೇ ಮುಚ್ಚುವಂತೆ ಕ್ರ ವಹಿಸುವುದಾಗಿ ನೋಡೆಲ್ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಗೆ ತಿಳಿಸಿದಾಗ ಸಭೆಯಲ್ಲಿದ್ದ ಬೆಸ್ಕಾಂ ಅಧಿಕಾರಿ ಕೂಡಲೇ ಕ್ರಮವಹಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.

5) ಕುಮಾರಸ್ವಾಮಿ ಬಡಾವಣೆಯ ವ್ಯಾಪ್ತಿಯಲ್ಲಿ ಸೊಳ್ಳೆಗಳು ಹೆಚ್ಚಾಗಿರುವ ಮೇರೆಗೆ ಸೊಳ್ಳೆಗಳಿಗೆ ಔಷಧಿಗ ಸಿಂಪಡಿಸುವಂತೆ ವಾರ್ಡ್ ಸಮಿತಿ ಸಭೆಯಲ್ಲಿ ಸೂಚಿಸಲಾಗಿರುತ್ತದೆ.

6) ಸಂಬಂಧಪಟ್ಟ ಬಡಾವಣೆಯ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ಕಾರ್ಯ ನಿರ್ವಹಿಸುವಂತೆ ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

ಮುಖ್ಯ ಆಯುಕ್ತರವರ ಸುತ್ತೋಲೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ತಿಳಿಸುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಂಡಿಸದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅನುಮತಿ ಮೇರೆಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 181 ರ ನೋಡಲ್ ಅಧಿಕಾರಿ.